ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 26–10–2017

## ***ಪತ್ರಿಕಾ ಪ್ರಕಟಣೆ***

**ಸಂಖ್ಯೆ: 219/339**

# ಸೂಕ್ಷ್ಮ ನೀರಾವರಿ ಯೋಜನೆಯಲ್ಲಿ 100 ರಷ್ಟು ಪ್ರಗತಿ ಸಾಧಿಸುವಂತೆ ಸಚಿವರ ಕರೆ

ಬೆಂಗಳೂರು, ಅಕ್ಟೋಬರ್ 26, (ಕರ್ನಾಟಕ ವಾರ್ತೆ)

ಪ್ರಸ್ತುತ ಸಾಲಿನಲ್ಲಿ ತೋಟಗಾರಿಕಾ ಇಲಾಖೆಗೆ ಸೂಕ್ಷ್ಮ ನೀರಾವರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು 390 ಕೋಟಿ ರೂ. ಗಳ ಅನುದಾನ ನಿಗದಿಯಾಗಿದ್ದು, ಒಟ್ಟು 61605 ಹೆಕ್ಟೇರ್ ಪ್ರದೇಶಗಳಲ್ಲಿ ಸೂಕ್ಷ್ಮ ನೀರಾವರಿಯನ್ನು ಅಳವಡಿಸುವ ಗುರಿ ಹೊಂದಲಾಗಿದೆ. ಈ ಬಾರಿ ಉತ್ತಮ ಮಳೆಯಾಗಿರುವ ಹಿನ್ನೆಲೆಯಲ್ಲಿ ಸದರಿ ಯೋಜನೆಯಡಿ ಶೇ 100 ರಷ್ಟು ಪ್ರಗತಿ ಸಾಧಿಸುವಂತೆ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ (ಪಿ.ಎಂ.ಕೆ.ಎಸ್.ವೈ) ಯಡಿ ಸೂಕ್ಷ್ಮ ನೀರಾವರಿ ಕಾರ್ಯಕ್ರಮ ಕುರಿತು ತೋಟಗಾರಿಕಾ ಇಲಾಖಾಧಿಕಾರಿಗಳಿಗೆ ವಿಕಾಸಸೌಧದಲ್ಲಿ ಇಂದು ಏರ್ಪಡಿಸಲಾಗಿದ್ದ ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಕ್ಷೀಣಿಸುತ್ತಿರುವ ಮಳೆಯಿಂದ ನೀರಿನ ಲಭ್ಯತೆ ಕಡಿಮೆಯಾಗುತ್ತಿದ್ದು, ಈ ಸಂಬಂಧ ಸೂಕ್ಷ್ಮ ನೀರಾವರಿ ಮಹತ್ವವನ್ನು ಅರಿತ ರಾಜ್ಯ ಸರ್ಕಾರ 1991–92 ನೇ ಸಾಲಿನಿಂದ ಹನಿ ನೀರಾವರಿ ಮತ್ತು ತುಂತುರು ನೀರಾವರಿ ಘಟಕಗಳ ಅಳವಡಿಕೆಗಳಿಗೆ ಪ್ರೋತ್ಸಾಹ ನೀಡುತ್ತಿದೆ ಎಂದ ಸಚಿವರು, ರಾಜ್ಯದಲ್ಲಿ ಬೇಸಾಯ ಪ್ರದೇಶದ ಒಟ್ಟು 120.09 ಲಕ್ಷ ಹೆಕ್ಟೇರ್‌ನಲ್ಲಿ ಒಟ್ಟು 20.36 ಲಕ್ಷ ಹೆಕ್ಟೇರ್ ತೋಟಗಾರಿಕಾ ಬೆಳೆಗಳನ್ನು ಬೆಳೆಯಲಾಗಿದ್ದು, ಇಲ್ಲಿಯವರೆಗೆ ಒಟ್ಟು 5.37 ಲಕ್ಷ ಹೆಕ್ಟೇರ್ ವಿಸ್ತೀರ್ಣದಲ್ಲಿ ಸೂಕ್ಷ್ಮ ನೀರಾವರಿ ಘಟಕಗಳನ್ನು

ರೈತರ ತೋಟಗಳಲ್ಲಿ, ಜಮೀನಿನಲ್ಲಿ ಅಳವಡಿಸಲಾಗಿದ್ದು, ಇನ್ನೂ ಬಾಕಿ ಒಟ್ಟು 14.99 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಸೂಕ್ಷ್ಮ ನೀರಾವರಿ ಅಳವಡಿಕೆಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಂದರ್ಭ ಹನಿ ನೀರಾವರಿ ಮತ್ತು ತೋಟಗಾರಿಕಾ ತರಬೇತಿ ಕೈಪಿಡಿ ಬಿಡುಗಡೆ ಮಾಡಿದ ಸಚಿವರು, ಸಾಧನೆ ಕೇವಲ ಕೈಪಿಡಿ ರೂಪದಲ್ಲಿರದೇ ಯೋಜನೆಗಳು ವಾಸ್ತವವಾಗಿ ರೈತರಿಗೆ ತಲುಪಬೇಕು ಎಂದ ಅವರು, ಇಲಾಖೆಯ ಹಿರಿಯ ಅಧಿಕಾರಿಗಳು ಕಡತಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಬೇಕು, ಪ್ರತಿ ಮೂರು ತಿಂಗಳಿಗೊಮ್ಮೆ ಪ್ರಗತಿ ಪರಿಶೀಲಿಸಬೇಕು ಮತ್ತು ಪ್ರತಿ ತಿಂಗಳು ಅಧಿಕಾರಿಗಳ ಡೈರಿಯ ವರದಿಯನ್ನು ಕಳುಹಿಸಿಕೊಡಬೇಕೆಂದು ಸೂಚಿಸಿದರು.

ರಾಜ್ಯದಲ್ಲಿ ಪ. ಜಾತಿ ಹಾಗೂ ಪ. ಪಂಗಡ ರೈತ ಫಲಾನುಭವಿಗಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಲ್ಲಿ ನೀಡಿರುವ ಘಟಕ ವೆಚ್ಚದ ಪ್ರಕಾರ ನೀಡಲಾಗುವ ಶೇ 90 ರ ಸಹಾಯಧನ ಹಾಗೂ ಹನಿ ನೀರಾವರಿ ಘಟಕಕ್ಕೆ ತಗಲುವ ನೈಜ ವೆಚ್ಚದ ಪ್ರಕಾರ ನೀಡಬೇಕಾದ ಶೇ 90 ರ ಸಹಾಯಧನದಲ್ಲಿ ಬರುವ ವ್ಯತ್ಯಾಸದ ಮೊತ್ತವನ್ನು ರಾಜ್ಯ ವಲಯ ಯೋಜನೆಯಾದ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ನಿಯಮಾನುಸಾರ ವೆಚ್ಚ ಭರಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ ಸಚಿವರು ಹೊಸ ತಂತ್ರಜ್ಞಾನವನ್ನು ಬಳಿಸಿಕೊಂಡು ಚೀನಾ ಮತ್ತು ಇಸ್ರೇಲ್ ದೇಶಗಳಲ್ಲಿ ಸಾಧಿಸಲಾಗಿರುವ ಪ್ರಗತಿಯಂತೆ ನಮ್ಮ ರಾಜ್ಯದಲ್ಲೂ ತೋಟಗಾರಿಕಾ ಕ್ಷೇತ್ರದಲ್ಲಿ ಶೇ 100 ರಷ್ಟು ಪ್ರಗತಿ ಸಾಧಿಸುವಂತೆ ಅಧಿಕಾರಿಗಳಿಗೆ ಕರೆ ನೀಡಿದರು.

ತೋಟಗಾರಿಕಾ ಇಲಾಖೆಯ ಆಯುಕ್ತರಾದ ಪ್ರಭಾಷ್ ಚಂದ್ರರೇ, ತೋಟಗಾರಿಕಾ ಜಂಟಿ ನಿರ್ದೇಶಕ (ಹನಿ ನೀರಾವರಿ) ಡಾ. ಬಿ. ಕೃಷ್ಣ, ಇಲಾಖೆಯ ಜಂಟಿ ನಿರ್ದೇಶಕರುಗಳು, ಉಪ ನಿರ್ದೇಶಕರು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು.

ಎಂಆರ್‌ಎಂ:ಜಿಪಿಆರ್.

ಸಂಖ್ಯೆ: 220/340

## <u>ಸಿ ಮತ್ತು ಡಿ ವೃಂದದ ಹುದ್ದೆಗಳನ್ನು ಕನ್ನಡಿಗರಿಗೆ ಮೀಸಲಿಡಿ : ಪ್ರೋ.ಎಸ್.ಜಿ.ಸಿದ್ದರಾಮಯ್ಯ</u>

ಬೆಂ. ಗ್ರಾ. ಜಿ. ಅ. 26 (ಕರ್ನಾಟಕ ವಾರ್ತೆ) : ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ವಿಮಾನಯಾನ ಸಂಸ್ಥೆಗಳಲ್ಲಿರುವ ಶೇಕಡ 100 ರಷ್ಟು ಸಿ ಮತ್ತು ಡಿ ವೃಂದದ ಹುದ್ದೆಗಳನ್ನು ಕನ್ನಡಿಗರಿಗೆ ಮೀಸಲಿಡಬೇಕೆಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರೋ.ಎಸ್.ಜಿ.ಸಿದ್ದರಾಮಯ್ಯ ಹೇಳಿದರು.

ದೇವನಹಳ್ಳಿಯ ಕೆಂಪೇಗೌಡ ವಿಮಾನ ನಿಲ್ದಾಣದ ಏರ್‌ಪೋರ್ಟ್ ಕಚೇರಿ ಸಭಾಂಗಣದಲ್ಲಿಂದು ನಡೆದ ಕನ್ನಡ ಭಾಷೆ ಮತ್ತು ಸಂಸ್ಕೃತಿ ಅನುಷ್ಠಾನ ಕುರಿತ ಪ್ರಗತಿ ಪರಿಶೀಲನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೆಂಪೇಗೌಡ ವಿಮಾನ ನಿಲ್ದಾಣದೊಂದಿಗೆ 37 ಏರ್‌ಲೈನ್ಸ್ ಸಂಸ್ಥೆಗಳು ಸಂಪರ್ಕವನ್ನಿಟ್ಟುಕೊಂಡಿದ್ದು, ಆ ವಿಮಾನಯಾನ ಸಂಸ್ಥೆಗಳ ಸಿ ಮತ್ತು ಡಿ ವೃಂದದ ಹುದ್ದೆಗಳಲ್ಲಿ ಶೇಕಡ 60 ರಷ್ಟು ಕನ್ನಡಿಗರು ಮಾತ್ರ ಉದ್ಯೋಗಗಳನ್ನು ಹೊಂದಿದ್ದಾರೆ. ಇನ್ನುಳಿದ ಹುದ್ದೆಗಳಲ್ಲಿಯು ಕನ್ನಡಿಗರನ್ನೇ ನೇಮಕ ಮಾಡಬೇಕೆಂದರಲ್ಲದೆ. ಎ ಮತ್ತು ಬಿ ಹುದ್ದೆಗಳಲ್ಲಿ ಶೇಕಡ 30 ರಷ್ಟು ಹುದ್ದೆಗಳನ್ನು ಕನ್ನಡಿಗರಿಗೆ ಮೀಸಲಿಡಬೇಕೆಂದರು.

ಪ್ರತಿ ವರ್ಷ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದೊಂದಿಗೆ ದಸರಾ, ಕನ್ನಡ ರಾಜ್ಯೋತ್ಸವ ಸೇರಿದಂತೆ ವಿವಿಧ ಹಬ್ಬಗಳನ್ನು ಆಚರಿಸಲಾಗುತ್ತಿದೆ, ನಾಮಫಲಕ ಹಾಗೂ ಸಂಕೇತ ಫಲಕಗಳಲ್ಲಿ ಕನ್ನಡವನ್ನು ಬಳಸಲಾಗುತ್ತಿದೆ ಎಂದು ಕೆಂಪೇಗೌಡ ವಿಮಾನ ನಿಲ್ದಾಣದ ಕನ್ನಡ ಪ್ರಮೋಷನ್ ಸಮಿತಿಯ ಉಪಾಧ್ಯಕ್ಷರಾದ ವೆಂಕಟರಮಣ ತಿಳಿಸಿದಾಗ, ಅಂತರರಾಜ್ಯ ಮತ್ತು ಅಂತರರಾಷ್ಟ್ರೀಯ ಪ್ರಯಾಣಿಕರಲ್ಲಿ ಕರ್ನಾಟಕ ಸಂಸ್ಕೃತಿ, ಕನ್ನಡ ಪ್ರಜ್ಞೆ ಮೂಡಿಸಲು ಪತ್ರಿಕೆ, ಪುಸ್ತಕ, ಮೆನು ಜಾಹೀರಾತುಗಳಲ್ಲಿ ಕನ್ನಡವನ್ನು ಬಳಸಬೇಕು, ಕನ್ನಡ ಚಲನಚಿತ್ರ ಗೀತೆಗಳನ್ನು ಕೇಳಿಸಬೇಕು ಹಾಗೂ ಅತ್ಯುತ್ತಮ ಕನ್ನಡ ಚಲನಚಿತ್ರಗಳನ್ನು ಪ್ರದರ್ಶಿಸಬೇಕು. ಇದರಿಂದಾಗಿ ಕನ್ನಡ ಅನುಷ್ಠಾನವು ಇನ್ನಷ್ಟು ಪರಿಣಾಮಕಾರಿಯಾಗುವುದಲ್ಲದೆ, ವಿಮಾನ ಸಂಸ್ಥೆಗಳು ಜಾಗತಿಕ ಮಟ್ಟದಲ್ಲಿ ಸಾಂಸ್ಕೃತಿಕ ರಾಯಭಾರಿಗಳಾಗಿ ಕಾರ್ಯನಿರ್ವಹಿಸಿದಂತಾಗುತ್ತದೆ ಎಂದರು.

ಕೆಂಪೇಗೌಡ ವಿಮಾನ ನಿಲ್ದಾಣದ ಅಧಿಕೃತ ವೆಬ್‌ಸೈಟ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಕನ್ನಡಕ್ಕೆ ಆದ್ಯತೆ ನೀಡಬೇಕು, ವಿಮಾನ ನಿಲ್ದಾಣದಲ್ಲಿ ಕನ್ನಡ ಪುಸ್ತಕ ಮಾರಾಟ ಮಳಿಗೆ ಆರಂಭಿಸಬೇಕೆಂದರಲ್ಲದೇ ಸಿಬ್ಬಂದಿಗಳು ಕನ್ನಡದಲ್ಲಿ ವ್ಯವಹರಿಸಬೇಕು ಅನ್ಯ ರಾಜ್ಯದ ಸಿಬ್ಬಂದಿಗಳಿಗೆ ಕನ್ನಡ ಕಲಿಕಾ ತರಬೇತಿಗಳನ್ನು ಆಯೋಜಿಸಬೇಕೆಂದರು.

ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರುಗಳಾದ ಸಾಹಿತಿ ಡಾ॥ ಸಿದ್ದಲಿಂಗಯ್ಯ, ಮುಖ್ಯಮಂತ್ರಿ ಚಂದ್ರು, ರಿಜಿಸ್ಟ್ರಾರ್ ಮುರಳೀಧರ್ ಸೇರಿದಂತೆ ಕೆಂಪೇಗೌಡ ವಿಮಾನ ನಿಲ್ದಾಣದ ಕನ್ನಡ ಪ್ರಮೋಷನ್ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

